# ಕರ್ನಾಟಕ ಸರ್ಕಾರ

ಸಂಖ್ಯೆ : MWD 90 MDC 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 30.06.2017

ಇವರಿಂದ,

ಸರ್ಕಾರದ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ,

ವ್ಯವಸ್ಥಾಪಕ ನಿರ್ದೇಶಕರು,
ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ,
ವಿ.ವಿಗೋಪುರ, ಬೆಂಗಳೂರು.

ಮಾನ್ಯರೇ,

ವಿಷಯ: ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಮುಂಗಡ ಹಣವನ್ನು ವಿದ್ಯುತ್ ನಿಗಮಗಳಿಗೆ ಬಿಡುಗಡೆ ಮಾಡುವ ಬಗ್ಗೆ

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 34 ಎಂಡಿಸಿ 2013, ದಿನಾಂಕ:02.09.2013

2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಪತ್ರ ದಿನಾಂಕ:20.06.2017

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ (1)ರ ಸರ್ಕಾರದ ಆದೇಶದಲ್ಲಿ ಗಂಗಾ ಕಲ್ಯಾಣ ವೈಯಕ್ತಿಕ ಕೊಳವೆ ಬಾವಿಗಳ ಘಟಕ ವೆಚ್ಚವನ್ನು ವಿದ್ಯುದ್ಧೀಕರಣ ವೆಚ್ಚ ಸೇರಿಸಿ 2013-14ನೇ ಸಾಲಿನಿಂದ ಜಾರಿಗೆ ಬರುವಂತೆ ರೂ.1.50 ಲಕ್ಷಗಳಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಇದರಲ್ಲಿ ರೂ.1.50 ಲಕ್ಷಗಳು ಸಹಾಯಧನವಾಗಿದ್ದು, ರೂ.50,000/- ಗಳನ್ನು ಸಾಲದ ರೂಪದಲ್ಲಿ ನೀಡಲು ಆದೇಶಿಸಿದೆ.

ಉಲ್ಲೇಖಿತ (2)ರ ಪತ್ರದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ವಿದ್ಯುದ್ಧೀಕರಣಗೊಳಿಸಲು ಪ್ರತಿ ಸ್ಥಾವರಕ್ಕೆ ರೂ.50,000/-ಗಳಂತೆ ವಿದ್ಯುತ್ ನಿಗಮಗಳಿಗೆ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಪಾವತಿಸಲು ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೋರಲಾಗಿದೆ.

..2.

Scanned by CamScanner

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ರಾಜ್ಯದಾದ್ಯಂತ ಕೊರೆಸಲಾಗಿರುವ ಕೊಳವೆ ಬಾವಿಗಳಿಗೆ ಸಂಬಂಧಿಸಿದಂತೆ ಪ್ರತಿ ಕೊಳವೆ ಬಾವಿಗೆ ವಿದ್ಯುದ್ದೀಕರಣಗೊಳಿಸಲು ತಲಾ **ರೂ.50,000/-ಗಳನ್ನು** ನಿಗಧಿಪಡಿಸಲಾಗಿದೆ. ಈಗಾಗಲೇ ಕೊರೆಸಲಾಗಿರುವ, ನೀರನ್ನು ಹೊಂದಿರುವ ಯಶಸ್ವಿ ಕೊಳವೆ ಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಲು ಪ್ರತಿ ಕೊಳವೆ ಬಾವಿಗೆ **ರೂ.50,000/-ಗಳಂತೆ, (ಐವತ್ತು ಸಾವಿರ ರೂಪಾಯಿಗಳು ಮಾತ್ರ)** ಆಯಾ ವಿದ್ಯುತ್ ನಿಗಮಗಳಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಕೂಡಲೇ ಮುಂಗಡವಾಗಿ ಪಾವತಿಸಲು ಸರ್ಕಾರದ ಅನುಮತಿಯನ್ನು ನೀಡಲಾಗಿದೆಯೆಂದು ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಅಕ್ರಂಬಾಷ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

**ಪ್ರತಿ:**

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಬೆಂಗಳೂರು.
2) ಸಂಬಂಧಪಟ್ಟ ಮುಖ್ಯ ಅಭಿಯಂತರರುಗಳು.
3) ಎಲ್ಲಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ವ್ಯವಸ್ಥಾಪಕ ನಿರ್ದೇಶಕರ ಮುಖಾಂತರ)
4) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
5) ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು

Scanned by CamScanner

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿಗಳನ್ನು ಕೊರೆಸಲು, ಪಂಪ್‌ಸೆಟ್ ಮತ್ತು ಪೂರಕ ಸಾಮಗ್ರಿಗಳ ಸರಬರಾಜು, ಅಳವಡಿಕೆ ವಿದ್ಯುದ್ಧೀಕರಣ ಮತ್ತು 3ನೇ ತಪಾಸಣಾ ಸಂಸ್ಥೆಗಳನ್ನು ಗುರುತಿಸಲು ರಾಜ್ಯ ಮಟ್ಟದಲ್ಲಿ ಜಿಲ್ಲಾವಾರು ಟೆಂಡರ್ ಆಹ್ವಾನಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ:ಸಕಇ 219 ಎಸ್‌ಡಿಸಿ 2015, ಬೆಂಗಳೂರು, ದಿನಾಂಕ:20.10.2015.
2. ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:ಅಂಅನಿ/ಗಂಕಯೋ/ ಟೆಂಡರ್/66/2018-19, ದಿನಾಂಕ:30.05.2018.

*****

**ಪ್ರಸ್ತಾವನೆ:-**

ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ಪ್ರತಿ ವರ್ಷ ನಿಗದಿಪಡಿಸಿದ ಗುರಿಯಲ್ಲಿನ ಕೊಳವೆಬಾವಿಗಳನ್ನು ಕೊರೆದು, ಪಂಪ್‌ಸೆಟ್ ಅಳವಡಿಕೆ, ಪೂರಕ ಸಾಮಗ್ರಿಗಳ ಸರಬರಾಜು ಮತ್ತು 3ನೇ ತಪಾಸಣಾ ಸಂಸ್ಥೆಯಿಂದ ತಪಾಸಣೆ ಮಾಡಿಸುವ ಸಂಬಂಧ ಟೆಂಡರ್‌ಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999 ಮತ್ತು ನಿಯಮಗಳು 2000 ಅನ್ವಯ ಜಿಲ್ಲಾಧಿಕಾರಿಗಳ ಉಸ್ತುವಾರಿಯಲ್ಲಿ ಟೆಂಡರ್‌ಗಳನ್ನು ಕರೆಯಲು ಹಾಗೂ ವಿವಿಧ ಟೆಂಡರ್ ಸಮಿತಿಗಳನ್ನು ರಚಿಸಿ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ:20.10.2015ರಲ್ಲಿ ಆದೇಶಿಸಲಾಗಿದೆ.

ಪ್ರಸ್ತುತ ಜಿಲ್ಲಾಧಿಕಾರಿಗಳ ಉಸ್ತುವಾರಿಯಲ್ಲಿ ಪ್ಯಾಕೇಜ್‌ವಾರು ಟೆಂಡರ್ ಆಹ್ವಾನಿಸಲ್ಪಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಟೆಂಡರ್ ಆಹ್ವಾನಿಸಿ ಪ್ರಕ್ರಿಯೆ ಪೂರ್ಣಗೊಳಿಸಲು ಕನಿಷ್ಠ 4 ರಿಂದ 7 ತಿಂಗಳ ಕಾಲಾವಧಿ ತೆಗೆದುಕೊಳ್ಳುತ್ತಿದೆ. ಟೆಂಡರ್ ಕರೆಯಲು ಆದೇಶಿಸಿದ ನಂತರ ಟೆಂಡರ್ ಪ್ರಕ್ರಿಯೆಗೆ ಚಾಲನೆ ನೀಡಿದ್ದರು ಅವುಗಳನ್ನು ಪೂರ್ಣಗೊಳಿಸಿ ದರ ಹಾಗೂ ಏಜೆನ್ಸಿಗಳ ನೇಮಕಾತಿ ಅಂತಿಮಗೊಳಿಸಲು ಹೆಚ್ಚಿನ ಕಾಲಾವಧಿ ತೆಗೆದುಕೊಳ್ಳಲಾಗುತ್ತಿದೆ. ಇದರಿಂದಾಗಿ 2016-17 ಮತ್ತು 2017-18ನೇ ಸಾಲಿನ ಕೊಳವೆ ಬಾವಿಗಳನ್ನು ಕೊರೆಯಿಸಿ ಯೋಜನೆ ಸೌಲಭ್ಯವನ್ನು ಫಲಾನುಭವಿಗಳಿಗೆ ಒದಗಿಸುವಲ್ಲಿ ವಿಳಂಬವಾಗಿದ್ದು, ನಿಗದಿಯಂತೆ ಪ್ರಗತಿ ಸಾಧಿಸಲು ಸಾಧ್ಯವಾಗಿರುವುದಿಲ್ಲ. ಜಿಲ್ಲಾ ಮಟ್ಟದಲ್ಲಿ ಟೆಂಡರ್ ಪ್ರಕ್ರಿಯೆ ಪ್ರಗತಿ ಹಂತಗಳ ಬಗ್ಗೆ ಕೇಂದ್ರ ಕಛೇರಿಗೆ ಮಾಹಿತಿ ಲಭ್ಯವಾಗುತ್ತಿಲ್ಲ. ಆದುದರಿಂದ, ಈ ಸಮಸ್ಯೆಗಳನ್ನು ನಿವಾರಿಸುವ ಸಲುವಾಗಿ ಕೇಂದ್ರ ಕಛೇರಿಯಿಂದ ಪ್ಯಾಕೇಜ್‌ವಾರು ರಾಜ್ಯ ಮಟ್ಟದಲ್ಲಿ ಆಹ್ವಾನಿಸಲು ಸರ್ಕಾರದ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ:30.05.2018ರ ಏಕ ಕಡತದಲ್ಲಿ ಕೋರಿರುತ್ತಾರೆ.

KMDC LTD.
Head Office Bangalore
13 AUG 2018
No. 45



Scanned by CamScanner

ವ್ಯವಸ್ಥಾಪಕ ನಿರ್ದೇಶಕರು. ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಇವರ ಪ್ರಸ್ತಾವವನ್ನು ಕೂಲಂಕಷವಾಗಿ ಪರಿಶೀಲಿಸಿ. ರಾಜ್ಯ ಮಟ್ಟದಲ್ಲಿ ಜಿಲ್ಲಾವಾರು / ಪ್ಯಾಕೇಜ್‌ವಾರು ಟೆಂಡರುಗಳನ್ನು ಕರೆಯಲು ಟೆಂಡರ್ ಆಹ್ವಾನಿಸುವ / ಪರಿಶೀಲಿಸುವ ಮತ್ತು ಅಂಗೀಕರಿಸುವ ಪ್ರಾಧಿಕಾರಗಳನ್ನು ಈ ಕೆಳಕಂಡಂತೆ ಪುನರ್ ರಚಿಸಲು ನಿರ್ಧರಿಸಿ. ಈ ಕೆಳಕಂಡಂತೆ ಆದೇಶಿಸಿದೆ:

**ಸರ್ಕಾರದ ಆದೇಶ ಸಂಖ್ಯೆ: ಸಕಇ 281 ಎಸ್‌ಡಿಸಿ 2018,**
**ಬೆಂಗಳೂರು, ದಿನಾಂಕ: 21.07.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ಇವುಗಳಿಂದ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ಪ್ರತಿ ವರ್ಷ ನಿಗದಿಪಡಿಸಿದ ಗುರಿಯಂತೆ ಕೊಳವೆಬಾವಿಗಳನ್ನು ಕೊರೆದು, ಪಂಪ್‌ಸೆಟ್ ಅಳವಡಿಕೆ, ಪೂರಕ ಸಾಮಗ್ರಿಗಳ ಸರಬರಾಜು ಮತ್ತು 3ನೇ ತಪಾಸಣಾ ಸಂಸ್ಥೆಯಿಂದ ತಪಾಸಣೆ ಮಾಡಿಸುವ ಸಂಬಂಧ ಟೆಂಡರ್‌ಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ 1999 ಮತ್ತು ನಿಯಮಗಳು 2000 ಅನ್ವಯ ಟೆಂಡರ್ ಅಂಗೀಕಾರ ಪ್ರಾಧಿಕಾರವನ್ನು ಕೆಳಕಂಡಂತೆ ಪುನರ್ ರಚಿಸಿ ಆದೇಶಿಸಿದೆ:

**1) ಟೆಂಡರ್ ಆಹ್ವಾನಿಸುವ ಪ್ರಾಧಿಕಾರ:**

ಪ್ರಧಾನ ವ್ಯವಸ್ಥಾಪಕರು (ಅಭಿವೃದ್ಧಿ), ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

**2) ಟೆಂಡರ್ ಪರಿಶೀಲನಾ ಪ್ರಾಧಿಕಾರ:**

| ಕ್ರ. ಸಂ. | ಅಧಿಕಾರಿಗಳು | ಹುದ್ದೆ |
|---|---|---|
| 1 | ವ್ಯವಸ್ಥಾಪಕ ನಿರ್ದೇಶಕರು,<br>ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ | ಅಧ್ಯಕ್ಷರು |
| 2 | ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ | ಸದಸ್ಯರು |
| 3 | ವ್ಯವಸ್ಥಾಪಕ ನಿರ್ದೇಶಕರು,<br>ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ | ಸದಸ್ಯರು |
| 4 | ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ | ಸದಸ್ಯರು |
| 5 | ವ್ಯವಸ್ಥಾಪಕ ನಿರ್ದೇಶಕರು,<br>ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ | ಸದಸ್ಯರು |
| 6 | ಮುಖ್ಯ ಅಭಿಯಂತರರು,<br>ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು | ಸದಸ್ಯರು |
| 7 | ಮುಖ್ಯ ಅಭಿಯಂತರರು,<br>ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು | ಸದಸ್ಯರು |
| 8 | ಪ್ರಧಾನ ವ್ಯವಸ್ಥಾಪಕರು (ಅ),<br>ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ | ಸದಸ್ಯ ಕಾರ್ಯದರ್ಶಿ |



Scanned by CamScanner

3) ಟೆಂಡರ್ ಅಂಗೀಕಾರ ಪ್ರಾಧಿಕಾರ

| ಕ್ರ. ಸಂ. | ಅಧಿಕಾರಿಗಳು | ಹುದ್ದೆ |
|---|---|---|
| 1 | ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ. ಸಮಾಜ ಕಲ್ಯಾಣ ಇಲಾಖೆ | ಅಧ್ಯಕ್ಷರು |
| 2 | ವ್ಯವಸ್ಥಾಪಕ ನಿರ್ದೇಶಕರು. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ | ಸದಸ್ಯರು |
| 3 | ವ್ಯವಸ್ಥಾಪಕ ನಿರ್ದೇಶಕರು. ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ | ಸದಸ್ಯರು |
| 4 | ವ್ಯವಸ್ಥಾಪಕ ನಿರ್ದೇಶಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ.ನಿಗಮ ನಿಯಮಿತ | ಸದಸ್ಯರು |
| 5 | ವ್ಯವಸ್ಥಾಪಕ ನಿರ್ದೇಶಕರು. ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ | ಸದಸ್ಯರು |
| 6 | ಮುಖ್ಯ ಅಭಿಯಂತರರು, ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ. ಬೆಂಗಳೂರು | ಸದಸ್ಯರು |
| 7 | ಮುಖ್ಯ ಅಭಿಯಂತರರು. ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ. ಬೆಂಗಳೂರು | ಸದಸ್ಯರು |
| 8 | ವ್ಯವಸ್ಥಾಪಕ ನಿರ್ದೇಶಕರು. ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎನ್. ಸುಮತಿ). 20/7/18
ಸರ್ಕಾರದ ಅಧೀನ ಕಾರ್ಯದರ್ಶಿ-3.
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು. (ಎ ಮತ್ತು ಇ. ಲೆಕ್ಕಪರಿಶೋಧನೆ-1 ಮತ್ತು 2). ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ. ಸಮಾಜ ಕಲ್ಯಾಣ ಇಲಾಖೆ. ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ. ಆರ್ಥಿಕ ಇಲಾಖೆ. ವಿಧಾನಸೌಧ. ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ. ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ. ಬೆಂಗಳೂರು.
6. ಆಯುಕ್ತರು. ಸಮಾಜ ಕಲ್ಯಾಣ ಇಲಾಖೆ. ಬೆಂಗಳೂರು
7. ಆಯುಕ್ತರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ. ಬೆಂಗಳೂರು.
8. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
9. ನಿರ್ದೇಶಕರು. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ. ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು. ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ. ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ. ಬೆಂಗಳೂರು.



Scanned by CamScanner

12. ವ್ಯವಸ್ಥಾಪಕ ನಿರ್ದೇಶಕರು. ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ. ಬೆಂಗಳೂರು.
13. ವ್ಯವಸ್ಥಾಪಕ ನಿರ್ದೇಶಕರು. ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ ನಿಯಮಿತ. ಬೆಂಗಳೂರು.
14. ವ್ಯವಸ್ಥಾಪಕ ನಿರ್ದೇಶಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ. ಬೆಂಗಳೂರು.
15. ಮುಖ್ಯ ಅಬಿಯಂತರರು. ಕರ್ನಾಟಕ ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ. ಬೆಂಗಳೂರು
16. ಮುಖ್ಯ ಅಭಿಯಂತರರು. ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ. ಬೆಂಗಳೂರು.
17. ಪ್ರಧಾನ ವ್ಯವಸ್ಥಾಪಕ (ಅ). ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ. ಬೆಂಗಳೂರು.
18. ರಾಜ್ಯ ಖಜಾನಾಧಿಕಾರಿಗಳು. ರಾಜ್ಯ ಹುಜೂರ್ ಖಜಾನೆ. ಬೆಂಗಳೂರು.
19. ಉಪ ನಿರ್ದೇಶಕರು. ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಕೇಂದ್ರ. 2ನೇ ಮಹಡಿ. ಸೌತ್ ಬ್ಲಾಕ್. ಖನಿಜ ಭವನ. ದೇವರಾಜ ಅರಸು ರಸ್ತೆ. ಬೆಂಗಳೂರು.
20. ಮೇಲಿನ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಜಿಲ್ಲಾ ವ್ಯವಸ್ಥಾಪಕರ ಮೂಲಕ ಜಾರಿಗಾಗಿ.
21. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ. ವಿಕಾಸಸೌಧ.
22. ಸರ್ಕಾರದ ಜಂಟಿ ಕಾರ್ಯದರ್ಶಿ. ಸಮಾಜ ಕಲ್ಯಾಣ ಇಲಾಖೆ. ವಿಕಾಸಸೌಧ.
23. ಸರ್ಕಾರದ ಉಪ ಕಾರ್ಯದರ್ಶಿ. ಸಮಾಜ ಕಲ್ಯಾಣ ಇಲಾಖೆ. ವಿಕಾಸಸೌಧ.
24. ಸರ್ಕಾದ ಅಧೀನ ಕಾರ್ಯದರ್ಶಿ-1. ಸಮಾಜ ಕಲ್ಯಾಣ ಇಲಾಖೆ. ವಿಕಾಸಸೌಧ.
25. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು. ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ. ಬೆಂಗಳೂರು.
26. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ.
27. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ.
28. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ.
29. ಶಾಖಾ ರಕ್ಷ ಕಡತ / ಬಿಡಿ ಪ್ರತಿಗಳು.

Scanned by CamScanner

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗಂಗಾ ಕಲ್ಯಾಣ ಯೋಜನೆಯಡಿ ಅಂತರ್ಜಲದ ಮಟ್ಟ ಕುಸಿದಿರುವ ರಾಜ್ಯದ 06 ಜಿಲ್ಲೆಗಳಲ್ಲಿ ವೈಯಕ್ತಿಕ ಕೊಳವೆ ಬಾವಿಗೆ ನಿಗಧಿಪಡಿಸಿರುವ ಘಟಕ ವೆಚ್ಚವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 34 ಎಂಡಿಸಿ 2013, ದಿ: 02.09.2013.

2) ಸರ್ಕಾರಿ ಆದೇಶ ಸಂಖ್ಯೆ: ಸಕಇ 393 [illegible] 20[illegible] ದಿ: 06.01.2016.

3) ವ್ಯವಸ್ಥಾಪಕ ನಿರ್ದೇಶಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ: ಕಅಅನಿ/ಗಂಕಯೋ/2015-16/6628, ದಿನಾಂಕ: [illegible]

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದನ್ವಯ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವೈಯಕ್ತಿಕ ನೀರಾವರಿ ಕೊಳವೆ ಬಾವಿಗಳ ಘಟಕ ವೆಚ್ಚವನ್ನು (ವಿದ್ಯುದ್ದೀಕರಣ ವೆಚ್ಚವನ್ನು ಸೇರಿಸಿ) 2013-14ನೇ ಸಾಲಿನಿಂದ ಜಾರಿಗೆ ಬರುವಂತೆ ರೂ. 1.50 ಲಕ್ಷಗಳಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಇದರಲ್ಲಿ ರೂ. 1.50 ಲಕ್ಷಗಳು ಸಹಾಯಧನವಾಗಿದ್ದು ರೂ. 50,000/-ಗಳು ಸಾಲ ರೂಪದಲ್ಲಿ (ಷೇರು ಬಂಡವಾಳದಲ್ಲಿ ಭರಿಸಲಾಗುವುದು) ನೀಡಲು ಷರತ್ತುಗಳೊಂದಿಗೆ ಮಂಜೂರಾತಿ ನೀಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದನ್ವಯ ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಇವುಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ ಹಾಗೂ ತುಮಕೂರು ಜಿಲ್ಲೆಗಳಲ್ಲಿ ವೈಯಕ್ತಿಕ ನೀರಾವರಿ ಕೊಳವೆ ಬಾವಿಯನ್ನು. ಕೊರೆಯಲು ಈಗ ನೀಡುತ್ತಿರುವ ಸಹಾಯಧನವನ್ನು ರೂ. 1.50 ಲಕ್ಷಗಳಿಂದ ರೂ. 3.00 ಲಕ್ಷಕ್ಕೆ ಹೆಚ್ಚಿಸಿ ಆದೇಶಿಸಿದೆ ಹಾಗೂ ಒಟ್ಟು ಘಟಕ ವೆಚ್ಚ ರೂ. 4.00 ಲಕ್ಷ (ಸಹಾಯಧನ ರೂ. 3.00 ಲಕ್ಷ ಅವಧಿ ಸಾಲ ರೂ. 50,000/- ಮತ್ತು ವಿದ್ಯುದೀಕರಣಕ್ಕೆ ರೂ. 50,000/-)

ಮೇಲೆ (3)ರಲ್ಲಿ ಓದಲಾದ ಪತ್ರದನ್ವಯ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ ಹಾಗೂ ತುಮಕೂರು ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಕುಸಿದಿರುವುದರಿಂದ ಮತ್ತು ಕೊಳವೆಬಾವಿ ಕೊರೆಯಲು ಸುಮಾರು 1200 ಅಡಿಗೆ ತಲುಪಬೇಕಾಗಿರುತ್ತದೆ. ಆದುದರಿಂದ ಕೊಳವೆಬಾವಿ ಕೊರೆಯುವ ವೆಚ್ಚ ಅಧಿಕಗೊಂಡಿರುತ್ತದೆ. ಸರ್ಕಾರದಿಂದ ನಿಗಧಿಪಡಿಸಿದ ಘಟಕ ವೆಚ್ಚ ರೂ. 1.50 ಲಕ್ಷದೊಳಗೆ (ಸಹಾಯಧನ) ಈ 6 ಜಿಲ್ಲೆಗಳಲ್ಲಿ ಕೊಳವೆಬಾವಿ ಕೊರೆಯಲು ಸಾಧ್ಯವಾಗುತ್ತಿಲ್ಲದ ಕಾರಣ ಸಹಯಾನುದಾನ ಮಿತಿಯನ್ನು ರೂ. 1.50 ಲಕ್ಷದಿಂದ ರೂ. 3.00 ಲಕ್ಷಕ್ಕೆ ಹೆಚ್ಚಿಸುವ ಅಗತ್ಯವಿದೆ ಎಂದು ಹಾಗೂ ಸಮಾಜ ಕಲ್ಯಾಣ ಇಲಾಖೆಯಲ್ಲಿ ಈ 6 ಜಿಲ್ಲೆಗಳಲ್ಲಿ ಸಹಯಾನುದಾನ ಮಿತಿಯನ್ನು 3.00 ಲಕ್ಷಕ್ಕೆ ಹೆಚ್ಚಿಸಲಾದ್ದು. ಗಂಗಾ ಕಲ್ಯಾಣ ಯೋಜನೆಯು ರಾಜ್ಯದಲ್ಲಿನ 4 ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಸಾಮಾನ್ಯ ಯೋಜನೆಯಾಗಿರುವುದರಿಂದ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೂ ಸಹ ಸಹಯಾನುದಾನವನ್ನು ಮೇಲ್ಕಂಡ 6 ಜಿಲ್ಲೆಗಳಿಗೆ ಹೆಚ್ಚಿಸುವಂತೆ ವ್ಯವಸ್ಥಾಪಕ ನಿರ್ದೇಶಕರು

Office Bangalore
23 APR. 2016
443

Scanned by CamScanner

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಮೇಲೆ (3)ರಲ್ಲಿ ಓದಲಾದ ಪತ್ರದ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 09 MDC 2016, ಬೆಂಗಳೂರು, ದಿನಾಂಕ: 20.04.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವೈಯಕ್ತಿಕ ನೀರಾವರಿ ಕೊಳವೆ ಬಾವಿಗಳ ಘಟಕ ವೆಚ್ಚವನ್ನು ಕೆಳಕಂಡ 06 ಜಿಲ್ಲೆಗಳಿಗೆ ಮಾತ್ರ ಅನ್ವಯಿಸುವಂತೆ ಹಾಗೂ ದಿನಾಂಕ: 02.09.2013ರ ಸರ್ಕಾರದ ಆದೇಶದಲ್ಲಿನ ಷರತ್ತುಗಳಿಗೆ ಒಳಪಟ್ಟು ರೂ. 1.50 ಲಕ್ಷಗಳಿಂದ ರೂ.3.00 ಲಕ್ಷಗಳಿಗೆ ಹೆಚ್ಚಿ ಆದೇಶಿಸಲಾಗಿದೆ.

1. ಬೆಂಗಳೂರು ನಗರ
2. ಬೆಂಗಳೂರು ಗ್ರಾಮಾಂತರ
3. ಕೋಲಾರ
4. ಚಿಕ್ಕಬಳ್ಳಾಪುರ
5. ರಾಮನಗರ
6. ತುಮಕೂರು

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 83 ವೆಚ್ಚ-3/2016, ದಿನಾಂಕ: 29.03.2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಕ್ರಂ ಪಾಷ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ.

ಗೆ:

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4. ಕಾರ್ಯದರ್ಶಿ, ಕರ್ನಾಟಲ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು.
5. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ವ್ಯವಸ್ಥಾಪಕ ನಿರ್ದೇಶಕರ ಮೂಲಕ)
6. ಎಲ್ಲಾ ತಾಲ್ಲೂಕು ಆಯ್ಕೆ ಸಮಿತಿ ಅಧ್ಯಕ್ಷರು, (ವ್ಯವಸ್ಥಾಪಕ ನಿರ್ದೇಶಕರು ಮೂಲಕ)
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರ್ಥಿಕ ಇಲಾಖೆ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಯೋಜನಾ ಇಲಾಖೆ.
9. ಸರ್ಕಾರದ ಜಂಟಿ/ಅಧೀನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ(3)
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗಂಗಾ ಕಲ್ಯಾಣ ಯೋಜನೆಯಡಿ ವೈಯಕ್ತಿಕ ಕೊಳವೆ ಬಾವಿಗೆ ನಿಗದಿಪಡಿಸಿರುವ ಘಟಕ ವೆಚ್ಚವನ್ನು ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಸಕಇ 152 ಎಸ್‌ಡಿಸಿ 2002, ದಿನಾಂಕ: 06.06.2002

2) ಸರ್ಕಾರಿ ಆದೇಶ ಸಂಖ್ಯೆ: ಸಕಇ 48 ಎಸ್‌ಡಿಸಿ 2008, ದಿನಾಂಕ:12.11.2010

3) ಸರ್ಕಾರಿ ಆದೇಶ ಸಂಖ್ಯೆ: ಸಕಇ 243 ಎಸ್‌ಡಿಸಿ 2012, ದಿನಾಂಕ: 21.05.2013

4) ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಪ್ರಸ್ತಾವನೆ ದಿನಾಂಕ:27.06.2013.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆ ಬಾವಿಗಳ ಘಟಕ ವೆಚ್ಚವನ್ನು ರೂ. 75,000/-ದಿಂದ ರೂ.1.00 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಇದರಲ್ಲಿ ಸಹಾಯಧನ ರೂ.86,000/- ಮತ್ತು ಉಳಿದ ರೂ.14,000/- ಸಾಲದ ರೂಪದಲ್ಲಿ ನೀಡಲಾಗುವುದೆಂದು ತಿಳಿಸಲಾಗಿದೆ. ಮೇಲ್ಕಂಡ ಆದೇಶದನ್ವಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿಯೂ ಸಹ ಇದೇ ಆದೇಶದನ್ವಯ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆ ಬಾವಿಗಳ ಘಟಕ ವೆಚ್ಚವನ್ನು ರೂ. 86,000/-ದಿಂದ ರೂ.1.00 ಲಕ್ಷಕ್ಕೆ ಹೆಚ್ಚಿಸಲು ಹಾಗೂ ರೂ.50,000/-ಗಳವರೆಗೆ ಸಾಲವನ್ನು ನೀಡಲು ಆದೇಶಿಸಲಾಗಿದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿಯೂ ಸಹ ಇದೇ ಆದೇಶದನ್ವಯ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆ ಬಾವಿಗಳ ಘಟಕ ವೆಚ್ಚವನ್ನು ರೂ. 1.50ಲಕ್ಷದಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಇದರಲ್ಲಿ ರೂ. 1.50 ಲಕ್ಷ ಸಹಾಯಧನ ಮತ್ತು ರೂ.50,000/-ಗಳವರೆಗೆ ಸಾಲದ ರೂಪದಲ್ಲಿ ನೀಡಲಾಗುವುದೆಂದು ತಿಳಿಸಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿಯೂ ಸಹ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದ್ದು, ಇದಕ್ಕಾಗಿ ಮೇಲೆ (1) ರಿಂದ (2)ರವರೆಗೆ ಓದಲಾದ ಸರ್ಕಾರದ ಆದೇಶಗಳನ್ನು

KMDC LTD.
Head Office Bengaluru
03 SEP 2013
No. :..............................

Scanned by CamScanner

ಪರಿಗಣಿಸಲಾಗಿದ್ದು, ಈ ಆದೇಶಗಳ ಮಾರ್ಗಸೂಚಿಗಳನ್ವಯ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮೇಲ್ಕಂಡ ಆದೇಶಗಳಂತೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಈ ಯೋಜನೆಗೆ ಇದುವರೆವಿಗೂ ಸಾಲ ರೂಪದ ಹಣವನ್ನು ಯಾರಿಗೂ ಮಂಜೂರು ಮಾಡದಿರುವುದು ಕಂಡುಬರುತ್ತದೆ. ಅಲ್ಪಸಂಖ್ಯಾತರ ಸಮುದಯದ ಸಣ್ಣ ಮತ್ತು ಅತೀ ಸಣ್ಣ ರೈತರ ಖುಷ್ಕಿ ಜಮೀನುಗಳಿಗೆ ನೀರಾವರಿ ಸೌಲಭ್ಯವನ್ನು ಒದಗಿಸಲು ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕೊಳವೆ ಬಾವಿ ನಿರ್ಮಾಣದ ವೆಚ್ಚವು ಡೀಸೆಲ್, ಉಕ್ಕು ಮತ್ತು ತಾಮ್ರದ ಬೆಲೆಗಳ ಮೇಲೆ ನೇರ ಸಂಬಂಧ ಹೊಂದಿದ್ದು, ಇತ್ತೀಚಿನ ದಿನಗಳಲ್ಲಿ ಈ ಸಾಮಗ್ರಿಗಳ ಬೆಲೆಗಳು ಒಂದೇ ಸಮನೆ ಏರಿಕೆಯಾಗುತ್ತಿರುವುದರಿಂದ ವೈಯಕ್ತಿಕ ನೀರಾವರಿ ಕೊಳವೆ ಬಾವಿಗಳಿಗೆ ಸರ್ಕಾರ ನಿಗದಿಪಡಿಸಿರುವ ಘಟಕ ವೆಚ್ಚ ರೂ.1.50 ಲಕ್ಷದಲ್ಲಿ ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲ. ಹಾಗೂ ವಿದ್ಯುದ್ದೀಕರಣವು ಸಹ ಆಗದೆ ಇರುವುದು ಕಂಡುಬರುತ್ತಿದೆ. ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಯಲಾಗುವ ಕೊಳವೆ ಬಾವಿಗಳ ಆಳ ಸಾಮಾನ್ಯವಾಗಿ 120 ಮೀಟರ್‌ನಿಂದ 250 ಮೀಟರ್‌ಗಳ ವರೆಗೆ ಇರುತ್ತದೆ. ಈ ವೆಚ್ಚವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ಇಲಾಖೆಗಳು ಅಳವಡಿಸಿಕೊಂಡಿರುವ ಎಸ್‌ಆರ್ ದರಗಳಂತೆ ಲೆಕ್ಕಾಚಾರ ಮಾಡಲಾಗಿದ್ದು, ಒಂದು ಕೊಳವೆ ಬಾವಿ ಘಟಕಕ್ಕೆ ಸರಾಸರಿ ರೂ.2.28 ಲಕ್ಷಗಳು ತಗಲುತ್ತದೆ. ಆದುದರಿಂದ, ಪ್ರಸ್ತುತ ಇರುವ ಘಟಕ ವೆಚ್ಚದ ಮಿತಿಯನ್ನು ರೂ.2.00 ಲಕ್ಷಗಳಿಗೆ ನಿಗದಿಪಡಿಸಿ, ಇದರಲ್ಲಿ ರೂ.50,000/-ಗಳಿಗೆ ಅಥವಾ ಯಾವುದು ಕಡಿಮೆಯೋ ಅಲ್ಲಿಯವರೆಗೆ ವಿದ್ಯುದ್ದೀಕರಣ ವೆಚ್ಚವನ್ನು ಸಹ ಭರಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 34 MDC 2013, ಬೆಂಗಳೂರು ದಿನಾಂಕ: 02.09.2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವೈಯಕ್ತಿಕ ನೀರಾವರಿ ಕೊಳವೆ ಬಾವಿಗಳ ಘಟಕ ವೆಚ್ಚವನ್ನು (ವಿದ್ಯುದ್ದೀಕರಣ ವೆಚ್ಚವನ್ನು ಸೇರಿಸಿ) 2013-14ನೇ ಸಾಲಿನಿಂದ ಜಾರಿಗೆ ಬರುವಂತೆ ರೂ. 1.50 ಲಕ್ಷಗಳಿಂದ ರೂ.2.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಇದರಲ್ಲಿ ರೂ. 1.50ಲಕ್ಷಗಳು ಸಹಾಯಧನವಾಗಿದ್ದು ರೂ.50,000/-ಗಳು ಸಾಲ ರೂಪದಲ್ಲಿ (ಷೇರು ಬಂಡವಾಳದಲ್ಲಿ ಭರಿಸಲಾಗುವುದು) ನೀಡಲು ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಇದಕ್ಕೆ ತಗಲುವ ಸಹಾಯಧನ ವೆಚ್ಚವನ್ನು ಆಯವ್ಯಯದ ಲೆಕ್ಕಶೀರ್ಷಿಕೆ 2225-03-102-0-11 (10) ರಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು. ಸಾಲರೂಪದ ಹಣವನ್ನು ಷೇರು ಬಂಡಾವಳ ಲೆಕ್ಕಶೀರ್ಷಿಕೆಯಡಿಯಲ್ಲಿ ಭರಿಸತಕ್ಕದ್ದು.

## ಷರತ್ತುಗಳು

1. ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಮಾತ್ರ ವೈಯಕ್ತಿಕ ಕೊಳವೆ ಬಾವಿಯನ್ನು ಒದಗಿಸಲಾಗುವುದು.

2. ಫಲಾನುಭವಿಯು ಮತೀಯ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿರಬೇಕು.

3. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

Scanned by CamScanner

4. ಸಣ್ಣ ಮತ್ತು ಅತೀ ಸಣ್ಣ ರೈತರಾಗಿರಬೇಕು. ಕನಿಷ್ಠ 2 ಎಕರೆ ಗರಿಷ್ಠ 5 ಎಕರೆ ಜಮೀನನ್ನು ಹೊಂದಿರತಕ್ಕದ್ದು.

5. ವಾರ್ಷಿಕ ಕೌಟುಂಬಿಕ ಆದಾಯ ಗ್ರಾಮೀಣ ಪ್ರದೇಶಗಳಲ್ಲಿ ರೂ.96,000/-ಗಳು ಹಾಗೂ ನಗರ ಪ್ರದೇಶಗಳಲ್ಲಿ ರೂ.1.03 ಲಕ್ಷಗಳನ್ನು ಮೀರಬಾರದು.

6. ಒಂದೇ ಕುಟುಂಬದಲ್ಲಿನ ಸದಸ್ಯರ ಜಮೀನು ಅಕ್ಕಪಕ್ಕದಲ್ಲಿದ್ದು ಒಟ್ಟು 5 ಎಕರೆ ಭೂಮಿಯನ್ನು ಹೊಂದಿರತಕ್ಕದ್ದು.

7. ಸರ್ಕಾರದ ಆದೇಶ ಸಂಖ್ಯೆ ಸಕಇ 168 ಬಿಎಮ್‌ಎಸ್ 2010, ದಿನಾಂಕ: 25-07-2011 ರಲ್ಲಿ ಸೂಚಿಸಿರುವಂತೆ ಮಡಿಕೇರಿ, ಮಂಗಳೂರು, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಇಂತಹ ಜಿಲ್ಲೆಗಳಲ್ಲಿ ಜಮೀನಿನ ಲಭ್ಯತೆ ಬಹಳ ಕಡಿಮೆ ಇರುವುದರಿಂದ ಗರಿಷ್ಠ 1 ಎಕರೆ ಜಮೀನನ್ನು ಹೊಂದಿರತಕ್ಕದ್ದು.

8. ವಿಧಾನ ಸಭಾ ಕ್ಷೇತ್ರವಾರು ಪ್ರಸ್ತಾವನೆಗಳನ್ನು ಪರಿಗಣಿಸತಕ್ಕದ್ದು.

9. ಫಲಾನುಭವಿಗಳ ಆಯ್ಕೆಯನ್ನು ವಿಧಾನ ಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಕ್ಷೇತ್ರವಾರು ಆಯ್ಕೆ ಸಮಿತಿಯ ಮೂಲಕ ಮಾಡತಕ್ಕದ್ದು.

10. ಆಯಾ ಕ್ಷೇತ್ರದಲ್ಲಿ ಅರ್ಜಿ ಸಲ್ಲಿಸುವ ಸಣ್ಣ ಹಿಡುವಳಿದಾರರ ಭೂಮಿಯ ಪ್ರಮಾಣ 1 ರಿಂದ 5 ಎಕರೆ ಇಲ್ಲದಿದ್ದಲ್ಲಿ ಗರಿಷ್ಠ 1 ಎಕರೆ ಇರುವ ಫಲಾನುಭವಿಗಳನ್ನು ಪರಿಗಣಿಸತಕ್ಕದ್ದು.

11. ಡಿಪಿಎಪಿ ಪ್ರದೇಶಗಳಲ್ಲಿ 7.5 ಎಕರೆ ಜಮೀನು ಹೊಂದಿರುವ ಫಲಾನುಭವಿಗಳನ್ನು ಪರಿಗಣಿಸಲಾಗುವುದು.

12. ಕೊಳವೆ ಬಾವಿಯನ್ನು ಕೊರೆಸಿ ನಿಗಮದಿಂದ ಪಂಪ್‌ಸೆಟ್, ಮೋಟಾರು, ಕೇಬಲ್, ಪೈಪ್ ಪ್ಯಾನಲ್ ಬೋರ್ಡ್‌ಗಳನ್ನು ಹಾಗೂ ವಿದ್ಯುದ್ದೀಕರಣ ಒದಗಿಸತಕ್ಕದ್ದು.

13. ಫಲಾನುಭವಿಗಳ ಪ್ರಮಾಣವನ್ನು ಆಯಾ ಕ್ಷೇತ್ರದಲ್ಲಿನ ಅಲ್ಪಸಂಖ್ಯಾತರ ಜನಸಂಖ್ಯೆಯ ಆಧಾರದ ಮೇಲೆ ನಿಗದಿಪಡಿಸತಕ್ಕದ್ದು.

14. ಫಲಾನುಭವಿಗಳ ಆಯ್ಕೆಯಲ್ಲಿನ ವಿವಾದಗಳಿಗೆ ಸಂಬಂಧಿಸಿದಂತೆ, ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವು ಅಂತಿಮವಾಗಿರುತ್ತದೆ.

15. ಘಟಕ ವೆಚ್ಚಕ್ಕಿಂತ ಮೀರಿ ತಗಲುವ ವೆಚ್ಚಗಳನ್ನು ಫಲಾನುಭವಿಗಳೇ ಭರಿಸತಕ್ಕದ್ದು.

16. ನಿಗಮದಿಂದ ಸಾಲದ ಮೊತ್ತ ಬೇಕಾದಲ್ಲಿ ಸಾಲದ ಅರ್ಜಿಯೊಂದಿಗೆ ಈ ಕೆಳಕಂಡ ಮಾಹಿತಿ ದಾಖಲಾತಿಗಳನ್ನು ಲಗತ್ತಿಸಿ ಸಾಲ ಮಂಜೂರಾತಿಗಾಗಿ ನಿಗಮಕ್ಕೆ ಅರ್ಜಿಯನ್ನು ಕಳುಹಿಸತಕ್ಕದ್ದು.

ಅ. ಪೂರ್ಣ ಭರ್ತಿ ಮಾಡಿದ ಸಾಲದ ಅರ್ಜಿ (3 ಭಾವಚಿತ್ರದೊಂದಿಗೆ)

ಆ. ಜಾತಿ/ಆದಾಯ ಪ್ರಮಾಣ ಪತ್ರ.

ಇ. ಭೂ-ಹಿಡುವಳಿ ಪ್ರಮಾಣ ಪತ್ರ

ಈ. ಇತ್ತೀಚಿನ ಮೂರು ವರ್ಷದ ಆರ್‌ಟಿಸಿ

ಉ. ಕಂದಾಯ ಪಾವತಿ ರಸೀದಿ

Scanned by CamScanner

ಊ. ಮ್ಯೂಟೇಶನ್ ರಿಜಿಸ್ಟರ್‌ನ ಎಕ್ಸ್‌ಟ್ರಾಕ್ಟ್
ಎ. ಅರ್ಜಿದಾರ ಮತ್ತು ಜಾಮೀನುದಾರರಿಂದ ಆಸ್ತಿ ಮತ್ತು ಹೊಣೆಗಾರಿಕೆ ಘೋಷಣೆ
ಏ. ಮಂಜೂರಾದ ಸಾಲದ ಹಣವನ್ನು ಘಟಕ ವೆಚ್ಚಕ್ಕೆ ಲೆಕ್ಕೀಕರಿಸಿ ಸಂಬಂಧಿಸಿದ ವೆಚ್ಚಗಳಿಗೆ ನಿಯಮಾನುಸಾರವಾಗಿ ಬಿಡುಗಡೆ/ವೆಚ್ಚ ಮಾಡಲು ಅರ್ಜಿದಾರರ ಮುಚ್ಚಳಿಕೆ ಪತ್ರ ಪಡೆದುಕೊಳ್ಳತಕ್ಕದ್ದು

17. ಹೆಚ್ಚು ಆಳವಾಗಿ ಕೊರೆಯಬೇಕಾದಂತಹ ಕೊಳವೆ ಬಾವಿಗಳ ಪ್ರಕರಣಗಳಲ್ಲಿ ಪಂಪ್‌ಸೆಟ್ ಸಾಮಗ್ರಿಗಳಿಗೆ ಹಾಗೂ ಇತರೆ ಸಾಮಗ್ರಿಗಳಿಗೆ ಹೆಚ್ಚು ಹಣ ಖರ್ಚಾಗುವ ಸಾಧ್ಯತೆ ಇರುವುದರಿಂದ ಇಂತಹ ಪ್ರಕರಣಗಳಲ್ಲಿ ಹಣದ ಕೊರತೆ ಸರಿದೂಗಿಸಲು ಫಲಾನುಭವಿಗಳಿಗೆ ಸಾಲ ಮಂಜೂರಾತಿ ನೀಡಲಾಗುತ್ತದೆ. ಈ ಸಾಲ ಸೌಲಭ್ಯದ ಬಗ್ಗೆ ಫಲಾನುಭವಿಗಳಿಗೆ ಕೊಳವೆ ಭಾವಿ ಕೊರೆಯುವ ಮುಂಚೆಯೆ ತಿಳುವಳಿಕೆ ನೀಡಿ ಅಗತ್ಯವಿದ್ದಲ್ಲಿ ಸಾಲವನ್ನು ಪಡೆಯಲು ಸೂಚಿಸತಕ್ಕದ್ದು.

18. ಒಂದು ವೇಳೆ ಕೊಳವೆ ಭಾವಿ ಕೊರೆಯುವ ಸಂದರ್ಭದಲ್ಲಿ ಜಾಸ್ತಿ ಆಳ ಕೊರೆಯಬೇಕು ಎಂಬುದು ಕಂಡುಬಂದಲ್ಲಿ ಅದೇ ದಿನ ಫಲಾನುಭವಿಯಿಂದ ಸಾಲ ಪಡೆಯಲು ಒಪ್ಪಿಗೆ ಪತ್ರಕ್ಕೆ ಸಹಿ ಪಡೆದು ಕೊರೆಯುವ ಕೆಲಸವನ್ನು ಮುಂದುವರಿಸತಕ್ಕದ್ದು. ತದನಂತರ, ಸಾಲದ ದಾಖಲಾತಿಗಳನ್ನು ಪಂಪ್‌ಸೆಟ್‌ಗಳನ್ನು ಅಳವಡಿಸುವ ಮುನ್ನ ಕಡ್ಡಾಯವಾಗಿ ಪಡೆದು ನಿಗಮಕ್ಕೆ ಕಳುಹಿಸತಕ್ಕದ್ದು.

19. ರೂ. 5000/-ಗಳ ಸಾಲಕ್ಕೆ ಜಾಮೀನುದಾರರ ಅಗತ್ಯ ಇರುವುದಿಲ್ಲ ರೂ. 5,000/-ಗಳಿಗಿಂದ ಹೆಚ್ಚಿನ ಸಾಲಕ್ಕೆ ಜಾಮೀನುದಾರರ ಸಹಿಯನ್ನು ಪಡೆದುಕೊಳ್ಳತಕ್ಕದ್ದು.

20. ಸಾಲದ ಅರ್ಜಿಯನ್ನು ನಿಗಮಕ್ಕೆ ತಲುಪಿದ ತಕ್ಷಣ ನಿಗಮವು ಅರ್ಹ ಅರ್ಜಿದಾರರಿಗೆ ಸಾಲವನ್ನು ಮಂಜೂರು ಮಾಡುತ್ತದೆ. ಸಾಲ ಮಂಜೂರಾತಿ ಆದೇಶ ತಲುಪಿದ ನಂತರ ಅರ್ಜಿದಾರರಿಂದ ಸಾಲದ ಭದ್ರತಾ ದಾಖಲಾತಿಗಳನ್ನು ಜಿಲ್ಲಾ ವ್ಯವಸ್ಥಾಪಕರು ಪಡೆದುಕೊಳ್ಳತಕ್ಕದ್ದು. ದಸ್ತಾವೇಜುಗಳನ್ನು ಪಡೆದುದಕ್ಕೆ ಧೃಡೀಕರಣ ಪತ್ರವನ್ನು ಪಡೆದುಕೊಳ್ಳತಕ್ಕದ್ದು.

21. ಸಾಲ ಭದ್ರತಾ ದಾಖಲಾತಿಗಳನ್ನು ಪಡೆದ ದಿನವೆ ಸಾಲ ದಾಖಲಾತಿ ಪುಸ್ತಕದಲ್ಲಿ ಖಾತೆಯನ್ನು ತೆರೆದು ನಮೂದಿಸಿಕೊಳ್ಳತಕ್ಕದ್ದು. ಈ ಮಾಹಿತಿಯನ್ನು ಜಿಲ್ಲಾ ವ್ಯವಸ್ಥಾಪಕರಿಗೆ ಹಾಗೂ ಅರ್ಜಿದಾರರಿಗೆ ತಿಳಿಸಿ ಸಾಲ ಮಂಜೂರಾತಿ ಹಣವನ್ನು ಘಟಕ ವೆಚ್ಚಕ್ಕೆ ಲೆಕ್ಕೀಕರಿಸಿಕೊಳ್ಳತಕ್ಕದ್ದು.

22. ಸಾಲದ ಮೊತ್ತವನ್ನು ಗರಿಷ್ಠ ರೂ. 50,000/-ಗಳಿಗೆ ಮಂಜೂರು ಮಾಡತಕ್ಕದ್ದು ಇದಕ್ಕೆ ಶೇ. 4% ರಷ್ಟು ಸರಳ ಬಡ್ಡಿಯನ್ನು ಭರಿಸಲಾಗುತ್ತದೆ. ಈ ಸಾಲದ ಮೊತ್ತವನ್ನು ನಿಗಮದ ಷೇರು ಬಂಡವಾಳದ ಆಯವ್ಯಯದಿಂದ ಭರಿಸತಕ್ಕದ್ದು.

23. ಕೊಳವೆ ಭಾವಿಗೆ ವಿದ್ಯುತ್ ಸಂಪರ್ಕಗೊಂಡ ದಿನದಿಂದ ಒಂದು ವರ್ಷದವರೆಗೆ ವಿರಾಮಾವಧಿ ಇರುತ್ತದೆ. ಒಂದು ವರ್ಷ ಮುಗಿದ ನಂತರ ಮರುಪಾವತಿ ಅವಧಿಯು ಪ್ರಾರಂಭವಾಗುತ್ತದೆ. ಸಾಲದ ಹಣವನ್ನು ಮೂರು ವರ್ಷದೊಳಗಾಗಿ ತೀರಿಸತಕ್ಕದ್ದು.

Scanned by CamScanner

24. ಮಾಸಿಕ ಮರುಪಾವತಿ ಕಂತನ್ನು ಅರ್ಜಿದಾರರ ಆರ್ಥಿಕ ಪರಿಸ್ಥಿತಿಗನುಗುಣವಾಗಿ ನಿಗದಿ ಪಡಿಸತಕ್ಕದ್ದು.

25. ನಿಗಧಿತ ಅವಧಿಯಲ್ಲಿ ಮರುಪಾವತಿ ಮಾಡದಿದ್ದಲ್ಲಿ ಶೇ. 2%ರಷ್ಟು ಮಾಸಿಕ ಸುಸ್ತಿ ಬಡ್ಡಿಯನ್ನು ವಿಧಿಸತಕ್ಕದ್ದು.

26. ಮರುಪಾವತಿ ಕಂತಿನ ಮೊತ್ತವನ್ನು ಮಂಜೂರಾತಿ ಆದೇಶದಲ್ಲಿ ಸೂಚಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 508 ವೆಚ್ಚ-3/13, ದಿನಾಂಕ: 30-08-2013 ಹಾಗೂ ದಿನಾಂಕ: 31.08.2013 ರಂದು ಅಪರ ಮುಖ್ಯಕಾರ್ಯದರ್ಶಿರವರ ಅಧ್ಯಕ್ಷತೆಯಲ್ಲಿ ನಡೆದ ಏಕಗವಾಕ್ಷಿ ಸಭೆಯಲ್ಲಿ ಮೇಲಿನ ಯೋಜನೆಗೆ ನೀಡಿರುವ ಸಹಮತಿಯಂತೆ ಹೊರಡಿಸಲಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ನಾಗರತ್ನ)
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.

ರವರಿಗೆ:

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, ಇದರ 500 ಪ್ರತಿಗಳನ್ನು ಕೊಠಡಿ ಸಂಖ್ಯೆ:215, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು ಇವರಿಗೆ ಕಳುಹಿಸಲು ಕೋರಿದೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ ಲೆಕ್ಕಪರಿಶೋಧನೆ-2), ಕರ್ನಾಟಕ, ಬೆಂಗಳೂರು.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
3) ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
4) ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು.
5) ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ವ್ಯವಸ್ಥಾಪಕ ನಿರ್ದೇಶಕರ ಮೂಲಕ).
6) ಎಲ್ಲಾ ತಾಲ್ಲೂಕು ಆಯ್ಕೆ ಸಮಿತಿ ಅಧ್ಯಕ್ಷರು, (ವ್ಯವಸ್ಥಾಪಕ ನಿರ್ದೇಶಕರ ಮೂಲಕ).
7) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರ್ಥಿಕ ಇಲಾಖೆ.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಯೋಜನಾ ಇಲಾಖೆ.
9) ಸರ್ಕಾರದ ಉಪ/ಅಧೀನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
10) ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ(3).
11) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner